**ಡಿ. ಡಬ್ಲ್ಯು 5**

**ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.**

**ದಿನಾಂಕಃ** 05-12-2025

ಈ ದಿನ ನಾನು ನ್ಯಾಯಾಲಯಕ್ಕೆ ನನ್ನ ಲಿಖಿತ ಸತ್ಯ ಪ್ರತಿಜ್ಞೆ ಪ್ರಮಾಣ ಪತ್ರ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಿರುತ್ತವೆ ಮತ್ತು ಅವುಗಳ ಅಂಶವನ್ನು ಓದಿ ನಾನೇ ಸಹಿ ಮಾಡಿರುತ್ತೇನೆ.

**ಮುಂದುವರಿದ ಮುಖ್ಯ ವಿಚಾರಣೆಃ 14 ಮತ್ತು 16 ನೇ ಪ್ರತಿವಾದಿಗಳ ಪರ ಶ್ರೀ ಎಸ್ ಎಮ್ ಎನ್ ವಕೀಲರಿಂದ,**

ಈ ಪ್ರಕರಣದಲ್ಲಿ ನಾನು 14 ನೇ ಪ್ರತಿವಾದಿ ಇರುತ್ತೇನೆ. ಪ್ರಕರಣಕ್ಕೆ ಸಂಬಂಧಪಟ್ಟಂತೆ ನೊಂದಾಯಿತ ಕ್ರಯ ಪತ್ರದ ಮೂಲ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಈ ಹಂತದಲ್ಲಿ ವಾದಿ ಪರ ವಕೀಲರು ಸದ್ರಿ ದಾಖಲೆಯನ್ನು ಗುರುತಿಸಲು ತಕರಾರು ಎತ್ತಿರುವುದರಿಂದ ಅದನ್ನು ಸಾಬೀತುಪಡಿಸುವ ತಕರಾರಿಗೊಳಪಟ್ಟು ಅದನ್ನು ನಿಡಿ-14 ಎಂದು ಗುರುತಿಸಲಾಯಿತು.

ಆದ್ದರಿಂದ ವಾದಿಯ ದಾವೆಯನ್ನು ವಜಾ ಮಾಡಬೇಕಾಗಿ ವಿನಂತಿ.

**ಪಾಟೀ ಸವಾಲುಃ ವಾದಿ ಮತ್ತು ಇತರ ಪ್ರತಿವಾದಿಗಳ ಪರ ವಕೀಲರಿಂದ,**

(ಈ ಹಂತದಲ್ಲಿ ವಾದಿ ಮತ್ತು ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಪ್ರಕರಣ ಮುಂದೂಡಲಾಯಿತು.)

**(ತೆ.ನ್ಯಾದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ.**

**ಸಹಿ ಇದೆ.**

**ಹಿರಿಯ ಸಿವಿಲ್ ನ್ಯಾಯಾಧೀಶರು, ಭಟ್ಕಳ.**